ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 26-5-2017

# ಪತ್ರಿಕಾ ಆಮಂತ್ರಣ

1. ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ (ನಿ) ಬೆಂಗಳೂರು ವತಿಯಿಂದ – ಮಾವು ಮಾರಾಟ ಮೇಳ

**ಉದ್ಘಾಟನೆ:**

ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಹಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರು.

ದಿನಾಂಕ: 27-05-2017, ಶನಿವಾರ ಸಮಯ : ಬೆಳಿಗ್ಗೆ 10.30 ಗಂಟೆಗೆ

ಸ್ಥಳ: ಕಾಸ್ಮೋಪಾಲಿಟನ್ ಕ್ಲಬ್ ಆವರಣ, ಹೆಣ್ಣೂರು, ಬಾಣಸವಾಡಿ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

## ವಿದ್ಯುತ್ ಉಳಿತಾಯ ಮಾಡಲು ಉತ್ತಮ ಕಾರ್ಯಕ್ಷಮತೆಯುಳ್ಳ ಪಂಪ್‌ಸೆಟ್ ಬಳಕೆಗೆ ಇಂಧನ ಇಲಾಖೆ ಆದೇಶ – ಡಿ. ಕೆ. ಶಿವಕುಮಾರ್

ಬೆಂಗಳೂರು, ಮೇ 26 (ಕರ್ನಾಟಕ ವಾರ್ತೆ)

ರೈತರು ಇನ್ನು ಮುಂದೆ ಕಡ್ಡಾಯವಾಗಿ ವಿದ್ಯುತ್ ಉಳಿತಾಯ ಪಂಪ್ ಸೆಟ್‌ಗಳನ್ನು ಅಳವಡಿಸಿಕೊಳ್ಳಬೇಕು ಎಂದು ಇಂಧನ ಇಲಾಖೆ ಆದೇಶ ಹೊರಡಿಸಿದೆ ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸುದ್ಧಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು ಹೆಚ್ಚಿನ ಕಾರ್ಯಕ್ಷಮತೆವುಳ್ಳ 4 ಅಥವಾ 5 ಸ್ಟಾರ್ ರೇಟೆಡ್ ಪಂಪ್‌ಸೆಟ್‌ಗಳನ್ನು

ಅಳವಡಿಸಿಕೊಳ್ಳಲು ಸೂಚನೆ ನೀಡಲಾಗಿದೆ ಎಂದರು. ಈಗಾಗಲೇ ಇದಕ್ಕೆ ಕೇಂದ್ರ ವಿದ್ಯುತ್‌ಚ್ಛಕ್ತಿ ನಿಯಂತ್ರಣ ಆಯೋಗ ಈ ಯೋಜನೆಗೆ ಅನುಮತಿ ನೀಡಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಪ್ರಾಯೋಗಿಕವಾಗಿ ದೊಡ್ಡಬಳ್ಳಾಪುರ, ಬ್ಯಾಡಗಿ, ನಿಪ್ಪಾಣಿ, ಹಾಗೂ ಮಳವಳ್ಳಿಯಲ್ಲಿ ಹೆಚ್ಚಿನ ಕಾರ್ಯಕ್ಷಮತೆವುಳ್ಳ ಪಂಪ್‌ಸೆಟ್‌ಗಳನ್ನು ಅಳವಡಿಸಿರುವುದರಿಂದ ಶೇ 33 ರಿಂದ 39.1 ರಷ್ಟು ಉಳಿತಾಯವಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು ರಾಜ್ಯಾದ್ಯಂತ ಈ ಯೋಜನೆಯನ್ನು ವಿಸ್ತರಿಸಲಾಗಿದೆ ಎಂದರು.

ರಾಜ್ಯದ ಎಲ್ಲಾ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ನೂತನ ಕಾರ್ಯಕ್ಷಮತೆಯುಳ್ಳ ಪಂಪ್‌ಸೆಟ್‌ಗಳನ್ನು ಬಳಸುವಂತೆ ನಗರಾಭಿವೃದ್ಧಿ ಇಲಖೆ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳಿಗೆ ಸೂಚನೆ ನೀಡಲಾಗಿದೆ ಎಂದ ಸಚಿವರು ರಾಜ್ಯ ಸರ್ಕಾರ ವಾರ್ಷಿಕವಾಗಿ ಇಂಧನ ಇಲಾಖೆಗೆ ರೈತರ ಪಂಪ್‌ಸೆಟ್‌ಗಳಿಗೆ ಬಳಸುವ ವಿದ್ಯುತ್ತಿನ ಮೊತ್ತ 9,000 ಕೋಟಿ ರೂ. ಹಣವನ್ನು ಪಾವತಿ ಮಾಡುತ್ತಿದೆ.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 5 ಗ್ರಾಮಗಳನ್ನು ಮಾದರಿ ವಿದ್ಯುತ್ ಗ್ರಾಮವನ್ನಾಗಿ ಪರಿವರ್ತಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದ ಸಚಿವರು ಭಾಗ್ಯಜ್ಯೋತಿ ಮತ್ತು ಕುಟೀರ ಜ್ಯೋತಿ ಫಲಾನುಭವಿಗಳಿಗೆ ನೀಡುತ್ತಿದ್ದ 18 ಯೂನಿಟ್ ವಿದ್ಯುತ್ ಬದಲು 40 ಯೂನಿಟ್‌ಗೆ ಹೆಚ್ಚಿಸಲು ತೀರ್ಮಾನಿಸಲಾಗಿದ್ದು ಇದರಿಂದ ವಾರ್ಷಿಕವಾಗಿ ರಾಜ್ಯ ಸರ್ಕಾರ 388 ಕೋಟಿ ರೂ ಪಾವತಿಸಲಿದೆ ಎಂದರು.

ರಾಜ್ಯದಲ್ಲಿ ವಿವಿಧ ವೊಲ್ಟೇಜ್ ವರ್ಗದ 40 ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಕರ್ನಾಟಕ ನವೀಕರಿಸಬಹುದಾದ ಇಂಧನ ಮೂಲಗಳಿಂದ ಈ ವರ್ಷ 7236 ಮೆ. ವ್ಯಾಟ್ ಸಾಮರ್ಥ್ಯದ ವಿದ್ಯುತ್ ಘಟಕಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು. ಈಗಾಗಲೇ 110 ಮೆ. ವ್ಯಾಟ್ ವಿದ್ಯುತ್ ಉತ್ಪಾದನೆಯಾಗಿದೆ, ಇನ್ನು 43 ತಾಲ್ಲೂಕುಗಳಲ್ಲಿ ವಿಸ್ತರಿಸುವ ಬಗ್ಗೆ ಕೆ.ಇ.ಆರ್.ಸಿ. ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಇಂಧನ ಸಚಿವರು ತಿಳಿಸಿದರು.

ಕೆಪಿಪಿ:ಕೆಎನ್‌ಕೆ:ಜಿಪಿಆರ್.

## ಬಾಣಸವಾಡಿಯಲ್ಲಿ ಮೇ 27 ಮತ್ತು 28 ರಂದು ಮಾವು ಮೇಳ

**ಬೆಂಗಳೂರು, ಮೇ 26 (ಕರ್ನಾಟಕ ವಾರ್ತೆ)**

**ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ (ನಿ) ಬೆಂಗಳೂರು ವತಿಯಿಂದ ಕರ್ನಾಟಕ ರಾಜ್ಯ ಮಾವು ಬೆಳೆಗಾರರಿಗೆ ಮಾವು ಮಾರುಕಟ್ಟೆ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹಾಗೂ ಬೆಂಗಳೂರು ನಗರದ ವಿವಿಧ ಸ್ಥಳಗಳಲ್ಲಿ ಮಾವು ಮಾರಾಟ ಮೇಳವನ್ನು ಆಯೋಜಿಸಲಾಗುತ್ತಿದೆ.**

ಬೆಂಗಳೂರು ನಗರದ ಎಲ್ಲಾ ಭಾಗಗಳ ಗ್ರಾಹಕರಿಗೆ ಕಾರ್ಬೈಡ್ ಮುಕ್ತ ನೈಸರ್ಗಿಕವಾಗಿ ಮಾಗಿಸಿದ ಹಣ್ಣುಗಳನ್ನು ನೇರವಾಗಿ ಮಾವು ಬೆಳೆಗಾರರಿಂದ ಗ್ರಾಹಕರಿಗೆ ಒದಗಿಸಲು ಮೇ 27 ಮತ್ತು 28 ರಂದು ಹೆಣ್ಣೂರು-ಬಾಣಸವಾಡಿ, ಕಾಸ್ಮೋಪಾಲಿಟಿನ್ ಕ್ಲಬ್ ಆವರಣದಲ್ಲಿ ಎರಡು ದಿನಗಳ ಕಾಲ ಮಾವು ಮೇಳವನ್ನು ಹಮ್ಮಿಕೊಂಡಿದೆ.

ಈ ಮಾವು ಮೇಳವನ್ನು ಮೇ 27 ರಂದು ಬೆಳಿಗ್ಗೆ 10.30 ಗಂಟೆಗೆ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕೆ.ಜೆ. ಜಾರ್ಜ್ ಅವರು ಉದ್ಘಾಟಿಸಲಿದ್ದಾರೆ.

ಕೆ.ಆರ್ ಪುರಂ ವಿಧಾನಸಭಾ ಕ್ಷೇತ್ರದ ಶಾಸಕ ಭೈರತಿ ಬಸವರಾಜ, ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ಅಧ್ಯಕ್ಷ ಎಲ್ ಗೋಪಾಲಕೃಷ್ಣ ಹಾಗೂ ಉಪಾಧ್ಯಕ್ಷರಾದ ಪಿ. ರಾಜಕುಮಾರ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಎಸ್‌ಎಂ:ಜೆಡಿ:ಜಿಪಿಆರ್.

# ಮೈಸೂರಿನ ಮಿಲಿಟರಿ ಬಾಲಕರ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಮೇ 26 (ಕರ್ನಾಟಕ ವಾರ್ತೆ)

ಮೈಸೂರು ನಗರದಲ್ಲಿರುವ ಮಿಲಿಟರಿ ಬಾಲಕರ ವಸತಿ ನಿಲಯಕ್ಕೆ 2017-18 ನೇ ಸಾಲಿನ ಶೈಕ್ಷಣಿಕ ವರ್ಷಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದ್ದು, 6ನೇ ತರಗತಿಯಿಂದ 10ನೇ ತರಗತಿವರೆಗೆ ಓದುತ್ತಿರುವ ಕರ್ನಾಟಕ ರಾಜ್ಯದ ಮಾಜಿ ಸೈನಿಕರ ಗಂಡು ಮಕ್ಕಳಿಗೆ ಅರ್ಹತೆ ಹಾಗೂ ಆದ್ಯತೆ ಮೇರೆಗೆ ಉಚಿತ ಪ್ರವೇಶ ನೀಡಲಾಗುವುದು. ಮೈಸೂರು ನಗರದಲ್ಲಿರುವ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ನಂತರವೇ ನಿಲಯದಲ್ಲಿ ಪ್ರವೇಶ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಹತ್ತಿರ, ಮೈಸೂರು ಇವರಿಂದ ಕಾರ್ಯಾಲಯದ ಕೆಲಸದ ದಿನಗಳಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ : 0821 -2425240 ಮೂಲಕ ತಿಳಿದುಕೊಳ್ಳಬಹುದು. ಭರ್ತಿಮಾಡಿದ ಅರ್ಜಿಗಳನ್ನು ಮೇ 30 ರೊಳಗೆ ಸಲ್ಲಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ವೈದ್ಯಾಧಿಕಾರಿ ಅಮಾನತ್ತು

ಬೆಂಗಳೂರು, ಮೇ 26 (ಕರ್ನಾಟಕ ವಾರ್ತೆ)

ಡಾ. ದಿಲ್‌ಶಾದ್ ಬಾನು, ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಫರಹತಾಬಾದ, ಕಲಬುರಗಿ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರ ವಿರುದ್ಧದ ಕರ್ತವ್ಯ ನಿರ್ಲಕ್ಷ್ಯತೆ ಆರೋಪದ ಬಗ್ಗೆ ಇಲಾಖಾ

**ವಿಚಾರಣೆ ಶಿಸ್ತುಕ್ರಮ ಬಾಕಿ ಇರಿಸಿ ಈ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತ ಸುಬೋಧ್ ಯಾದವ್ ಅದೇಶಿಸಿದ್ದಾರೆ.**

**ಎಸ್‌ಎಂ:ಜೆಡಿ:ಜಿಪಿಆರ್**

## <u>ಅವಧಿ ವಿಸ್ತರಣೆ</u>

**ಬೆಂಗಳೂರು, ಮೇ 26 (ಕರ್ನಾಟಕ ವಾರ್ತೆ)**

2017–18ನೇ ಸಾಲಿಗೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಮೊದಲನೇ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ಸ್ವೀಕರಿಸಲು ಅಂತಿಮ ದಿನಾಂಕ:25–05–2017 ಎಂದು ನಿಗಧಿಪಡಿಸಲಾಗಿತ್ತು.

ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ 2017–18ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ರಾಜ್ಯದ 121 ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ **"ದಾಖಲೆ ಪರಿಶೀಲನೆ ಹಾಗೂ ಆನ್‌ಲೈನ್ ಅರ್ಜಿ ಸಲ್ಲಿಕೆ ಕೇಂದ್ರ"**ಗಳ ಮೂಲಕ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್‌ನಿಂದ ಅರ್ಜಿ ಪಡೆಯಲು, ಭರ್ತಿ ಮಾಡಿದ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು, ಹಾಗೂ ಮೂಲ ದಾಖಲೆಗಳನ್ನು ಪರಿಶೀಲಿಸಲು ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

**ವೆಬ್‌ಸೈಟ್‌ನಿಂದ ಅರ್ಜಿಯನ್ನು ಪಡೆಯಲು, ಮೂಲ ದಾಖಲೆಗಳ ಪರಿಶೀಲನೆಯೊಂದಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವಿಸ್ತರಿಸಲಾದ <u>ದಿನಾಂಕ: 05–06–2017ರ</u> ಸಂಜೆ 5:00 ಗಂಟೆಯವರೆಗೆ**

ಹೆಚ್ಚಿನ ಮಾಹಿತಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ www.dte.kar.nic.in ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ www.kea.kar.nic.in ಅನ್ನು ನೋಡಲು ತಾಂತ್ರಿಕ ಶಿಕ್ಷಣ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು ಮೇ 26 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 28–05–2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ

ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ನಾರಾಯಣ ನಾಯ್ಕ ಮತ್ತು ತಂಡ, ಹಾಸನ, ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಚಂದ್ರಪ್ಪ. ಎನ್ ಮತ್ತು ತಂಡ, ಮೈಸೂರು ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಕು: ಗೌರಿಪ್ರಿಯ.ಎಸ್** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ರಾಜಾಜಿ ನಗರ, ಬೆಂಗಳೂರು ಶಾಲಾ ವಿದ್ಯಾರ್ಥಿಯಿಂದ ಹಾಡುಗಾರಿಕೆ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ **"ಸೈಕಲ್ ಡೇ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ್‍ಯಾಲಿ, ಓದುವ ಜೋನ್ ಹಾಗೂ ಇನ್ನಿತರೇ ಮನರಂಜನೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ರಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಗ್ಲೆನ್ ಈಗಲ್ಸ್ ಗ್ಲೋಬಲ್ ಆಸ್ಪತ್ರೆ, ರಿಚ್ ಮಂಡ್ ರಸ್ತೆ ರವರಿಂದ ಉಚಿತ ಕಾರ್ಡಿಯಾಕ್ ಕ್ಯಾಂಪ್ ಏರ್ಪಡಿಸಲಾಗಿದೆ.

# ಪ್ರವೇಶ ಪತ್ರ ರವಾನೆ

ಬೆಂಗಳೂರು ಮೇ 26 (ಕರ್ನಾಟಕ ವಾರ್ತೆ)

ಪ್ರಥಮ ಡಿ.ಎಲ್.ಎಡ್/ಡಿ.ಇಡಿ, ದ್ವಿತೀಯ ಡಿ.ಇಡಿ ಮತ್ತು ಪಿಪಿಟಿ ಪರೀಕ್ಷೆಗಳನ್ನು ದಿನಾಂಕ:05.06.2017ರಿಂದ ದಿನಾಂಕ:12.06.2017ರವರೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ಇತರೆ ಪರೀಕ್ಷೆಗಳು) ವತಿಯಿಂದ ನಡೆಸಲಾಗುತ್ತಿದೆ. ಪ್ರವೇಶ ಪತ್ರಗಳನ್ನು ಎಲ್ಲಾ ಡಿ.ಇಡಿ, ಪಿ.ಪಿ.ಟಿ ಸಂಸ್ಥೆಗಳಿಗೆ ಡಯಟ್ ಮುಖಾಂತರ ಕಳುಹಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಿಸಿದ ಸಂಸ್ಥೆಗಳಿಂದ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳುವಂತೆ, ನಿರ್ದೇಶಕರು(ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Admission Tickets dispatched

**Bangalore, May 26 (Karnataka Information)**

**ID.El.Ed/D.Ed, II D.Ed& P.P.T Examinations will be conducted from 05.06.2017 to 12.06.2017 by Karnataka Secondary Education Examination Board(Other Exams). Admission Tickets have been dispatched to all the institutions through concerned DIETS. Students are informed to collect the same from the concerned D.Ed, P.P.T Institutions as per the statement of Director(Other Exams), Karnataka Secondary Education Examination Board, Bangalore.**

## GST Conference

**Bangalore, May 26 (Karnataka Information)**

**Hasmukh Adhia, Revenue Secretary, Ministry of Finance Government of India will hold a meeting as a part of the GST (Goods and Service Tax) out-reach programme at Bengaluru on 30th May 2017 at 10-30 hours at Sir Puttanna Chetty Town Hall, JC Road, Bengaluru. The meeting is jointly organized by Chief Commissioner of Central Excise and Service Tax, Bengaluru and Commissioner of Commercial Tax, Bengaluru. Members of trade and industry are cordially invited to attend the Town Hall meeting which will include an interactive session.**